ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1251/2021

ಚಾಸಾ:7 ಪ್ರಾಸಾ:7

ದಿನಾಂಕ: 23.08.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಪ್ರಶಾಂತ ಶೆಟ್ಟಿ |
| ತಂದೆಯ ಹೆಸರು | : | ಶೇಖರ ಶೆಟ್ಟಿ |
| ವಯಸ್ಸು | : | 47 ವರ್ಷ |
| ಉದ್ಯೋಗ | : | ಸಪ್ಲೈಯರ್ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿಯ ಪರಿಚಯವಿಲ್ಲ. ಸಾಕ್ಷಿ ನಿಪಿ-3 ರಿಂದ 5 ರಲ್ಲಿ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-3(ಸಿ) ರಿಂದ ನಿಪಿ-5(ಸಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-6 ಮತ್ತು 7ನ್ನು ನೋಡಿ ಗುರುತಿಸಿರುತ್ತಾರೆ. ಸದ್ರಿ ದಾಖಲೆಗಳಿಗೆ ಸಹಿಗಳನ್ನು ಕುಂದಾಪುರ ಠಾಣೆಯಲ್ಲಿ ಮಾಡಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ:19-02-2021 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-4ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-1 ರವರ ಸಮಕ್ಷಮ ಸಂಜೆ 4-30ರಿಂದ 515ರವರೆಗೆ ಪಂಚನಾಮೆ ಮತ್ತು ನಕ್ಷೆ ತಯಾರಿಸಿ ಹೆಲ್ಮೇಟನ್ನು ಸ್ಥಳದಲ್ಲಿ ಇತ್ತು ಎಂದರೆ ನನಗೆ ತಿಳಿದಿಲ್ಲ. ಆ ವೇಳೆಗೆ ನಿಪಿ-3 ಮತ್ತು 4ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಹೆಲ್ಮೇಟನ್ನು ಸಾಕ್ಷಿದಾರರಾಗಿ ಬಿಟ್ಟು ಕೊಡಲಾಯಿತು ಎಂದರೆ ಸರಿಯಲ್ಲ.

ದಿ: 20-02-2021 ರಂದು ಅಪಘಾತಕ್ಕೆ ಒಳಗಾಗಿದ್ದ ಕೆಎ-20-ಇಬಿ-9759 ಗಾಡಿಯನ್ನು ಮುಂದಿನ ಕ್ರಮಕ್ಕಾಗಿ ವಶಕ್ಕೆ ಪಡೆದು ಕ್ರಮವನ್ನು ಬೆಳಗ್ಗೆ 9-15 ರಿಂದ 9-

45ರವರೆಗೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆ ವೇಳೆಗೆ ನಿಪಿ-5ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಮೇಲಿನ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**